# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ** | : | 315 |
| **ಮಾನ್ಯ ಸದಸ್ಯರ ಹೆಸರು** | : | ಶ್ರೀ ತಿಪ್ಪಣ್ಣಪ್ಪ ಕಮಕನೂರ<br>(ವಿಧಾನಸಭೆಯಿಂದ ಚುನಾಯಿತರಾದವರು) |
| **ಉತ್ತರಿಸಬೇಕಾದ ದಿನಾಂಕ** | : | 06-03-2025 |
| **ಉತ್ತರಿಸುವ ಸಚಿವರು** | : | ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು |

*****

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಮಾತಾ ಮಾಣಿಕೇಶ್ವರಿ ದೇವಸ್ಥಾನ ಗುರುಮಿಟಕಲ್ಲಿನ ಯಾಣ ಗುಂದಿಯಲ್ಲಿ ಪ್ರಸಿದ್ಧವಾಗಿದ್ದು, ಮಾತಾ ಮಾಣಿಕೇಶ್ವರಿಯವರು 97 ವರ್ಷಗಳ ಕಾಲ ಅನ್ನ ನೀರಿಲ್ಲದೆ ಬಾಳಿ ಬದುಕಿ ಮಾತೆಯವರು ವರ್ಷಕ್ಕೆ ಒಂದೇ ದಿನ ಅದರಲ್ಲೂ ಶಿವರಾತ್ರಿ ದಿನ ಭಕ್ತರಿಗೆ ದರ್ಶನ ಕೊಡುತ್ತಿದ್ದ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೆ; | ಬಂದಿದೆ. ಹೌದು. |
| ಆ) | ಒಂದೇ ದಿನ ಯಾಣಗುಂದಿಯಲ್ಲೆ ಇದ್ದು, ಶ್ರೀಶೈಲ ಯಾಣಗುಂದಿಯಲ್ಲಿ ಇವರು ದರ್ಶನ ನೀಡುತ್ತಿದ್ದ ಮಾತೆ ಶಕ್ತಿ ಸ್ವರೂಪಿಣಿಯವರು ಧೈವಾಧೀನರಾಗಿ 2-3 ವರ್ಷ ಕಳೆದರೂ ಇಂತಹ ಮಹಾತ್ಮದ ದೇವಸ್ಥಾನ ಇನ್ನೂ ನಿರೀಕ್ಷೆಗೆ ತಕ್ಕಂತೆ ಅಭಿವೃದ್ಧಿ ಆಗದೆ ಇರುವುದು ನಿಜವೇ; | |
| ಇ) | ಈ ದೇವಸ್ಥಾನ ಬೆಣ್ಣೆ ತೋರಾ ಡ್ಯಾಂ ನಿಂದ 2 ಕಿ.ಮೀ ಹತ್ತಿರದಲ್ಲಿದ್ದು, ಇದರ ಅಭಿವೃದ್ಧಿಯನ್ನು ಪ್ರವಾಸೋದ್ಯಮ ಇಲಾಖೆ ವತಿಯಿಂದ ನಿರ್ವಹಿಸಿ ಇದೊಂದು ಆಕರ್ಷಣೀಯ ಪ್ರವಾಸಿ ತಾಣವಾಗಿ ಅಭಿವೃದ್ಧಿಪಡಿಸಲು ಕ್ರಮವಹಿಸಲಾಗುವುದೆ? | ಇಲಾಖೆಯಿಂದ ಈಗಾಗಲೇ ಮಾತಾ ಮಾಣಿಕೇಶ್ವರಿ ದೇವಸ್ಥಾನದ ಹತ್ತಿರ ಈ ಕೆಳಕಂಡ ಕಾಮಗಾರಿಗಳನ್ನು ಕೈಗೊಳ್ಳಲಾಗಿರುತ್ತದೆ.<br>1. 2017-18ನೇ ಸಾಲಿನಲ್ಲಿ ಕಲಬುರಗಿ ಜಿಲ್ಲೆ, ಸೇಡಂ ತಾಲ್ಲೂಕಿನ ಯಾನಾಗುಂದಿ ಗ್ರಾಮದ ಮಹಾತಪಸ್ವಿನಿ ಮಾತಾ ಮಾಣಿಕೇಶ್ವರಿ ದೇವಸ್ಥಾನದ ಬಳಿ ಯಾತ್ರಿನಿವಾಸ ನಿರ್ಮಾಣ ಕಾಮಗಾರಿಯನ್ನು ರೂ.50.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೆ.ಆರ್.ಐ.ಡಿ.ಎಲ್, ಬೆಂಗಳೂರು ಇವರ ಮೂಲಕ ಕೈಗೊಂಡು ಪೂರ್ಣಗೊಳಿಸಲಾಗಿರುತ್ತದೆ.<br>2. 2016-17ನೇ ಸಾಲಿನ ವಿಶೇಷ ಅಭಿವೃದ್ಧಿ ಯೋಜನೆಯಡಿ ಮಂಜೂರಾಗಿದ್ದ ಕಲಬುರಗಿ ಜಿಲ್ಲೆಯ ಚಿಂಚೋಳಿ ವಿಧಾನಸಭಾ ಕ್ಷೇತ್ರದಲ್ಲಿ ಬೆಣ್ಣೆತೋರಾ ಡ್ಯಾಂನಿಂದ (0.60 ಕಿ.ಮೀ ರಿಂದ 10.00 ಕಿ.ಮೀ) ಚಿಂಚೋಳಿ (ಹೆಚ್) ಕಾಳಗಿ ಚಿತ್ತಾಪೂರ ತಾಲ್ಲೂಕಿನ ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು ರೂ.586.62 ಲಕ್ಷಗಳ ಅಂದಾಜು ವೆಚ್ಚದಲ್ಲಿ ಲೋಕೋಪಯೋಗಿ ಇಲಾಖೆ ಮೂಲಕ ಕೈಗೊಂಡು ಪೂರ್ಣಗೊಳಿಸಲಾಗಿರುತ್ತದೆ. |

| | | |
|---|---|---|
| | | ಆದರೆ, ಪ್ರಸ್ತುತ ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ/08/ವೆಚ್ಚ-7/2024, ದಿನಾಂಕ: 15.04.2024ರ ಅನುಬಂಧ-3ರಲ್ಲಿ ದೇವಸ್ಥಾನಗಳ ಅಭಿವೃದ್ಧಿ ಕಾಮಗಾರಿಗಳಿಗೆ ಮುಜರಾಯಿ ಇಲಾಖೆಯಡಿ ಅನುದಾನ ಒದಗಿಸುವುದರಿಂದ, ಪ್ರವಾಸೋದ್ಯಮ ಇಲಾಖೆಯಡಿ ಯಾವುದೇ ದೇವಸ್ಥಾನಗಳ ಮೂಲಭೂತ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳುವುದು ಸಮಂಜಸವಾಗಿರುವುದಿಲ್ಲ ಹಾಗೂ ಖಾಸಗಿ ಜಾಗ ಅಥವಾ ಖಾಸಗಿ ಸಂಸ್ಥೆಯ ಪ್ರದೇಶದಲ್ಲಿ ಕೈಗೊಳ್ಳಲಾಗುವ ಯಾವುದೇ ಕಾಮಗಾರಿಗಳಿಗೆ ಬಂಡವಾಳ ಲೆಕ್ಕಶೀರ್ಷಿಕೆ ಅಡಿ ಅನುದಾನ ಬಿಡುಗಡೆ ಮಾಡಲು ನಿಯಮಗಳಲ್ಲಿ ಅವಕಾಶ ಇರುವುದಿಲ್ಲ ಎಂಬುದಾಗಿ ತಿಳಿಸಲಾಗಿರುತ್ತದೆ.<br><br>ಕಾರಣ ಸದರಿ ಪ್ರವಾಸಿ ತಾಣದ ಅಭಿವೃದ್ಧಿಗೆ ಸಂಬಂಧಿಸಿದಂತೆ ಯಾವುದೇ ಹೊಸ ಪ್ರಸ್ತಾವನೆಗಳು ಪ್ರಸ್ತುತ ಇಲಾಖೆಯ ಮುಂದೆ ಇರುವುದಿಲ್ಲ. |

**ಸಂಖ್ಯೆ: TOR 30 TDV 2025**

(ಎಚ್.ಕೆ.ಪಾಟೀಲ)
ಕಾನೂನು, ನ್ಯಾಯ, ಮಾನವ ಹಕ್ಕುಗಳು,
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ
ಹಾಗೂ ಪ್ರವಾಸೋದ್ಯಮ ಸಚಿವರು.